All India Radio: Bangalore

Regional Bulletin In Kannada

**ಆಕಾಶವಾಣಿ ಬೆಂಗಳೂರು**

**ಪ್ರದೇಶ ಸಮಾಚಾರ**

26.04.2025 2.30 P.M.

<><><><>

ಮುಖ್ಯಾಂಶಗಳು

- ದೇಶಾದ್ಯಂತ ಉದ್ಯೋಗ ಮೇಳ ; ರಾಜ್ಯದ ಹಲವೆಡೆ ಕೇಂದ್ರ ಸಚಿವರಿಂದ ಉದ್ಯೋಗ ನೇಮಕಾತಿ ಪತ್ರ ವಿತರಣೆ
- ರಾಜ್ಯದಲ್ಲಿರುವ ಪಾಕಿಸ್ತಾನಿಯವರನ್ನು ವಾಪಸ್ ಕಳುಹಿಸಲು ಸರ್ಕಾರ ಬದ್ಧ - ಮುಖ್ಯಮಂತ್ರಿ ಸಿದ್ದರಾಮಯ್ಯ
- ವ್ಯಾಟಿಕನ್‌ನ ಸೇಂಟ್ ಪೀಟರ್ಸ್ ಚೌಕದಲ್ಲಿ ಪೋಪ್ ಫ್ರಾನ್ಸಿಸ್ ಅಂತ್ಯಕ್ರಿಯೆ ; ವಿಶ್ವದ ಹಲವು ಗಣ್ಯರು ಭಾಗಿ
- ಸ್ಮಾರ್ಟ್ ಮೀಟರ್ ಸೇರಿ ಜನವಿರೋಧಿ ನೀತಿಗಳನ್ನು ಕೈಬಿಡುವಂತೆ ಸರ್ಕಾರಕ್ಕೆ ಬಿಜೆಪಿ ಒತ್ತಾಯ
- ನಾಳೆ ದೇಶ-ವಿದೇಶಗಳಲ್ಲಿನ ಭಾರತೀಯರೊಂದಿಗೆ ಪ್ರಧಾನಿ ಮನದ ಮಾತು

<><><><>

ಪ್ರಧಾನಿ ನರೇಂದ್ರ ಮೋದಿ ಅವರು, ದೇಶಾದ್ಯಂತ ೪೭ ಕಡೆ ೫೧ ಸಾವಿರ ನವ ಉದ್ಯೋಗಿಗಳಿಗೆ ನೇಮಕಾತಿ ಪತ್ರವನ್ನು ಇಂದು ವಿಡಿಯೋ ಕಾನ್ಫರೆನ್ಸ್ ಮೂಲಕ ವಿತರಿಸಿದರು. ಈ ಸಂದರ್ಭದಲ್ಲಿ ಬೆಂಗಳೂರಿನ ವಾಣಿಜ್ಯ ತೆರಿಗೆ ಕಚೇರಿಯಲ್ಲಿ ಏರ್ಪಡಿಸಲಾದ ಉದ್ಯೋಗ ಮೇಳದಲ್ಲಿ ಭಾಗವಹಿಸಿ ಮಾತನಾಡಿದ ಕೇಂದ್ರ ರೈಲ್ವೆ ಖಾತೆ ರಾಜ್ಯ ಸಚಿವ ವಿ. ಸೋಮಣ್ಣ ಸಾಂಕೇತಿಕವಾಗಿ ೪೫ ನವ ಉದ್ಯೋಗಿಗಳಿಗೆ ನೇಮಕಾತಿ ಪತ್ರ ವಿತರಿಸಿದರು. ಇದೇ ವೇಳೆ ಮಾತನಾಡಿದ ಅವರು, ೨೦೨೫ ರಲ್ಲಿ ನಮ್ಮ ದೇಶ ೫ ಟ್ರಿಲಿಯನ್ ಡಾಲರ್ ಅರ್ಥವ್ಯವಸ್ಥೆಯಲ್ಲಿ ಹೊರ ಹೊಮ್ಮಲಿದೆ. ಹಾಗೂ ೨೦೩೦ರೊಳಗೆ ೭ ಮಿಲಿಯನ್ ಡಾಲರ್ ತಲುಪುವ ವಿಶ್ವಾಸವಿದೆ ಎಂದು ಹೇಳಿದರು. ಇತ್ತೀಚೆಗೆ ಮಂಡಿಸಲಾದ ಆಯ-ವ್ಯಯದಲ್ಲಿ ಉದ್ಯೋಗ ಸೃಷ್ಟಿ ಕೌಶಲ್ಯಾಭಿವೃದ್ಧಿ ಮತ್ತು ತರಬೇತಿಗೆ ಆದ್ಯತೆ ನೀಡಲಾಗಿದೆ. ಈವರೆಗೆ ೧೪ ಉದ್ಯೋಗ ಮೇಳಗಳನ್ನು ಆಯೋಜಿಸಲಾಗಿದ್ದು, ಸುಮಾರು ೯ ಲಕ್ಷ ಯುವಕರಿಗೆ ಉದ್ಯೋಗ ಒದಗಿಸಲಾಗಿದೆ ಎಂದು ತಿಳಿಸಿದರು. ರೈಲ್ವೆ ಇಲಾಖೆಯು ಈ ನಿಟ್ಟಿನಲ್ಲಿ ಸಕ್ರಿಯವಾಗಿದ್ದು, ೭೧ ಸಾವಿರ ಜನರಿಗೆ ಉದ್ಯೋಗ ನೀಡಿದೆ. ಕನ್ನಡದಲ್ಲಿ ಪರೀಕ್ಷೆ ಬರೆಯುವ

ಅವಕಾಶ ನೀಡಬೇಕೆಂದು ಪ್ರಧಾನಿಯವರನ್ನು ವಿನಂತಿಸಿದಾಗ ಅವರು, ದೇಶದ ೧೦ ಪ್ರಾದೇಶಿಕ ಭಾಷೆಗಳಲ್ಲಿ ಪರೀಕ್ಷೆ ಬರೆಯುವ ಅವಕಾಶ ಒದಗಿಸಿರುವುದು ಸ್ವಾಗತಾರ್ಹ ಎಂದು ವಿ. ಸೋಮಣ್ಣ ತಿಳಿಸಿದರು. ಮುದ್ರಾ ಯೋಜನೆ ಮೂಲಕ ೩೧.೬ ಕೋಟಿ ರೂಪಾಯಿ ಸಾಲ ಸೌಲಭ್ಯ ಒದಗಿಸಲಾಗಿದ್ದು, ಇದರಲ್ಲಿ ಶೇಕಡ ೭೦ ಮಹಿಳೆಯರು ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡಕ್ಕೆ ಸೇರಿದವರಾಗಿದ್ದಾರೆ ಎಂದು ತಿಳಿಸಿದ್ದಾರೆ. ವಿಶ್ವ ಕರ್ಮ ಯೋಜನೆಯ ಮೂಲಕ ೨೮ ಲಕ್ಷ ಕರಕುಶಲ ಕರ್ಮಿಗಳಿಗೆ ಲಾಭವಾಗಿದೆ. ಕರ್ನಾಟಕದ ೧.೦೯ ಲಕ್ಷ ಶಿಲ್ಪಕಲೆ ನಿರತ ವೃತ್ತಿಪರರಿಗೆ ಇದರ ಲಾಭ ತಲುಪಿದೆ ಎಂದು ತಿಳಿಸಿದರು. ಕಾರ್ಯಕ್ರಮದಲ್ಲಿ ಭಾಗವಹಿಸಿದ್ದ ಬೆಂಗಳೂರು ಕೇಂದ್ರ ಸಂಸದ ಪಿ.ಸಿ. ಮೋಹನ್ ಮಾತನಾಡಿತ್ತ ೨೦೨೨ ರಲ್ಲಿ ಪ್ರಧಾನಮಂತ್ರಿ ಉದ್ಯೋಗ ಮೇಳವನ್ನು ಆರಂಭಿಸಿದ್ದು, ೧೦ ಲಕ್ಷ ಉದ್ಯೋಗ ನೀಡುವ ಭರವಸೆ ಈಡೇರಿಸಲು ಕಾರ್ಯ ತತ್ಪರರಾಗಿದ್ದಾರೆ. ಕೋವಿಡ್ ಸವಾಲುಗಳನ್ನು ಮೀರಿ ಭಾರತವನ್ನು ೫ನೇ ಆರ್ಥಿಕ ಶಕ್ತಿಯಾಗಿ ಹೊರ ಹೊಮ್ಮಿಸುವಲ್ಲಿ ಯಶಸ್ವಿಯಾಗಿದ್ದಾರೆ. ನೆರೆ-ಹೊರೆಯ ರಾಷ್ಟ್ರಗಳು ಕೋವಿಡ್‌ನ ಪ್ರತಿಕೂಲ ಪರಿಣಾಮದಲ್ಲಿ ಸಂಘರ್ಷದಲ್ಲಿರುವ ಭಾರತ ಇಂದು ಆರ್ಥಿಕವಾಗಿ ವೇಗವಾಗಿ ಬೆಳೆಯುತ್ತಿರುವ ಅರ್ಥವ್ಯವಸ್ಥೆ ಹೊಂದಿದ ರಾಷ್ಟ್ರವಾಗಿ ರೂಪುಗೊಂಡಿದೆ ಎಂದು ತಿಳಿಸಿದರು. ಅರ್ಥ ವ್ಯವಸ್ಥೆ ಸುಧಾರಿಸಿದ ಕಾರಣ ಉದ್ಯೋಗ ಸೃಷ್ಟಿಗೆ ದಾರಿ ಸುಗಮವಾಗಿದೆ ಎಂದು ಅವರು ಹೇಳಿದರು.

<><><><>

ಕೇಂದ್ರ ಸರ್ಕಾರದ ಸೂಚನೆಯಂತೆ ರಾಜ್ಯದಲ್ಲಿ ಇರಬಹುದಾದ ಪಾಕಿಸ್ತಾನಿ ಪ್ರಜೆಗಳ ಬಗ್ಗೆ ಮಾಹಿತಿ ಕಲೆ ಹಾಕಿ ಅವರನ್ನು ವಾಪಸ್ ಕಳುಹಿಸಲು ಕ್ರಮ ಕೈಗೊಳ್ಳಲಾಗುವುದು ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ತಿಳಿಸಿದ್ದಾರೆ.

ಇಂದು ಮೈಸೂರಿನ ತಮ್ಮ ನಿವಾಸದ ಬಳಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ನಾವು ಎಂದಿಗೂ ಯುದ್ಧದ ಪರವಾಗಿಲ್ಲ, ನಾವು ಯಾವತ್ತೂ ಶಾಂತಿಯ ಪರ ಇದ್ದೇವೆ ಹೀಗಾಗಿ ಪಾಕಿಸ್ತಾನದ ಜೊತೆ ಯುದ್ಧದ ಅನಿವಾರ್ಯವಿಲ್ಲ ಹಾಗೂ ಯುದ್ಧದ ಬಗ್ಗೆ ಯೋಚನೆ ಬೇಡವಾಗಿದೆ. ಆದರೆ ಯುದ್ಧದ ಬದಲಾಗಿ ಭದ್ರತೆಯನ್ನು ಬಿಗಿ ಮಾಡಿಕೊಳ್ಳಬೇಕಿದೆ ಎಂದು ಅವರು ಹೇಳಿದರು.

<><><><>

ವ್ಯಾಟಿಕನ್ ನಗರದ ಸೇಂಟ್ ಪೀಟರ್ಸ್ ಚೌಕದಲ್ಲಿ ಪೋಪ್ ಫ್ರಾನ್ಸಿಸ್ ಅವರ ಅಂತ್ಯಕ್ರಿಯೆ ನಡೆಯುತ್ತಿದೆ, ವಿಶ್ವ ನಾಯಕರು, ಗಣ್ಯರು ಮತ್ತು ಸಾವಿರಾರು ನಿಷ್ಠಾವಂತರು ಹಾಜರಿದ್ದರು. ಜಾಗತಿಕ ರೋಮನ್ ಕ್ಯಾಥೋಲಿಕ್ ಚರ್ಚ್‌ನ ಮುಖ್ಯಸ್ಥರನ್ನು ರೋಮ್‌ನಲ್ಲಿರುವ ಸೇಂಟ್ ಮೇರಿ ಮೇಜರ್ ಬೆಸಿಲಿಕಾದಲ್ಲಿ ಅಂತ್ಯಕ್ರಿಯೆ ಮಾಡಲಾಗುತ್ತಿದೆ. ಭಾರತೀಯ ಸಮಯ ಮಧ್ಯಾಹ್ನ ೧:೩೦

ಕ್ಕೆ ಅಂತ್ಯಕ್ರಿಯೆಯ ಪ್ರಾರ್ಥನೆ ಪ್ರಾರಂಭವಾಯಿತು. ಒಂದೂವರೆ ಲಕ್ಷಕ್ಕೂ ಹೆಚ್ಚು ಜನರು ಕಾರ್ಯಕ್ರಮದಲ್ಲಿ ಭಾಗವಹಿಸುತ್ತಿದ್ದಾರೆ. ಅಂತ್ಯಕ್ರಿಯೆಯಲ್ಲಿ ರಾಷ್ಟ್ರಪತಿ ದ್ರೌಪದಿ ಮುರ್ಮು, ಭಾರತ ಸರ್ಕಾರ ಮತ್ತು ಜನರ ಪರವಾಗಿ ಸಂತಾಪ ಸೂಚಿಸುತ್ತಿದ್ದಾರೆ. ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್, ಫ್ರಾನ್ಸ್ ಅಧ್ಯಕ್ಷ ಇಮ್ಯಾನುಯಲ್ ಮ್ಯಾಕ್ರಾನ್, ಬ್ರೆಜಿಲ್ ಅಧ್ಯಕ್ಷ ಲೂಯಿಸ್ ಇನಾಸಿಯೊ ಲೂಲಾ ಡಾಸಿಲ್ವಾ ಮತ್ತು ಅರ್ಜೆಂಟಿನಾ ಅಧ್ಯಕ್ಷ ಜೇವಿಯರ್ ಮಿಲಿ ಸೇರಿದಂತೆ ವಿವಿಧ ರಾಷ್ಟ್ರಗಳ ಅಧ್ಯಕ್ಷರು ಮತ್ತಿತರ ಗಣ್ಯರು ಪಾಲ್ಗೊಂಡಿದ್ದಾರೆ. ಕಳೆದ ಒಂದು ಶತಮಾನದಲ್ಲಿ ವ್ಯಾಟಿಕನ್ ನಗರದ ಹೊರಗೆ ಪೋಪ್ ಒಬ್ಬರ ಅಂತ್ಯಕ್ರಿಯೆ ನಡೆಯುತ್ತಿರುವುದು ಇದೇ ಮೊದಲನೇ ಬಾರಿಯಾಗಿದೆ. ೧೯೦೩ರಲ್ಲಿ ಪೋಪ್ ೧೩ನೇ ಲಿಯೋ ಅಂತ್ಯ ಸಂಸ್ಕಾರ ವ್ಯಾಟಿಕನ್ ನಗರದ ಹೊರಗೆ ನಡೆದಿತ್ತು.

<><><><>

ಆಕಾಶವಾಣಿಯ ಜನಪ್ರಿಯ ಮಾಸಿಕ ಮನ್ ಕಿ ಬಾತ್ ಕಾರ್ಯಕ್ರಮದಲ್ಲಿ ಪ್ರಧಾನಮಂತ್ರಿ ನರೇಂದ್ರ ಮೋದಿ, ನಾಳೆ ಬೆಳಗ್ಗೆ ೧೧ ಗಂಟೆಗೆ ದೇಶ-ವಿದೇಶಗಳಲ್ಲಿರುವ ಭಾರತೀಯರೊಂದಿಗೆ ತಮ್ಮ ಮನದಾಳದ ಮಾತುಗಳನ್ನು ಹಂಚಿಕೊಳ್ಳಲಿದ್ದಾರೆ. ಇದು ಮನ್ ಕಿ ಬಾತ್ ಕಾರ್ಯಕ್ರಮದ ೧೨೧ನೇ ಆವೃತ್ತಿಯಾಗಿದೆ. ಈ ಕಾರ್ಯಕ್ರಮ ಆಕಾಶವಾಣಿ ಮತ್ತು ದೂರದರ್ಶನದ ಎಲ್ಲ ವಾಹಿನಿಗಳು, ಎಐಆರ್ ನ್ಯೂಸ್ ಜಾಲತಾಣ, ನ್ಯೂಸ್ ಆನ್ ಏರ್ ಮೊಬೈಲ್ ಆಪ್‌ನಲ್ಲಿ ಪ್ರಸಾರವಾಗಲಿದೆ. ಹಿಂದಿ ಅವತರಣಿಕೆಯ ನಂತರ ಪ್ರಾದೇಶಿಕ ಭಾಷೆಗಳಲ್ಲಿ ಕಾರ್ಯಕ್ರಮ ಮೂಡಿಬರಲಿದೆ.

<><><><>

ಸ್ಮಾರ್ಟ್ ಮೀಟರ್ ವಿವಾದ ಸೇರಿದಂತೆ ಜನವಿರೋಧಿ' ನಿರ್ಧಾರಗಳನ್ನು ಕೈಬಿಡುವಂತೆ ಸರ್ಕಾರವನ್ನು ಬಿಜೆಪಿ ಒತ್ತಾಯಿಸಿದೆ. ಸಾಮಾಜಿಕ ಜಾಲ ತಾಣದಲ್ಲಿ ಪೋಸ್ಟ್ ಮಾಡಿರುವ ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ ವಿಜಯೇಂದ್ರ, ಇಂಧನ ಇಲಾಖೆ ನಷ್ಟದಲ್ಲಿದ್ದು ವಿದ್ಯುತ್ ದರಗಳನ್ನು ನಿರಂತರವಾಗಿ ಹೆಚ್ಚಿಸುವ ಮೂಲಕ ಗ್ರಾಹಕರ ಮೇಲೆ ಹೊರೆ ಹಾಕುತ್ತಲೇ ಇದೆ. ಜೊತೆಗೆ ಸ್ಮಾರ್ಟ್ ಮೀಟರ್‌ಗಳ ಅಳವಡಿಕೆ ಕಡ್ಡಾಯಗೊಳಿಸಿ ಪ್ರತಿ ಮೀಟರ್‌ಗೆ ೧೦ ಸಾವಿರ ರೂಪಾಯಿ ಬೆಲೆ ನಿಗದಿಪಡಿಸಿದೆ. ಆದ್ರೆ ಹೈಕೋರ್ಟ್ ಈ ನಿರ್ಧಾರವನ್ನು ತಡೆ ಹಿಡಿದಿದ್ದು, ಇನ್ನಾದರೂ ಈ ಸರ್ಕಾರ ಜನವಿರೋಧಿ ನೀತಿಗಳನ್ನು ಕೈಬಿಡುವಂತೆ ಒತ್ತಾಯಿಸಿದ್ದಾರೆ.

<><><><>

ಜಾಗತಿಕರಣದ ಆಕ್ರಮಣದಿಂದ ಜನಸಮುದಾಯಗಳ ಪಾರಂಪರಿಕ ಕಲೆ ಮತ್ತು ಸಂಸ್ಕೃತಿಯನ್ನು ಸಂರಕ್ಷಿಸಲು ಪರಿಣಾಮಕಾರಿ ಪ್ರಯತ್ನ ಅಗತ್ಯವಿದೆ ಎಂದು ಕನ್ನಡ ಅಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ

ಡಾ. ಪುರುಷೋತ್ತಮ ಬಿಳಿಮಲೆ ಹೇಳಿದ್ದಾರೆ. ಬೆಂಗಳೂರಿನ ರವೀಂದ್ರ ಕಲಾಕ್ಷೇತ್ರದಲ್ಲಿ ರಾಜಾಜಿನಗರದ ಶಿವಶಕ್ತಿ ನೃತ್ಯ ಶಾಲೆಯ ರಜತ ಮಹೋತ್ಸವ ಸಮಾರಂಭ ಉದ್ಘಾಟಿಸಿ ಮಾತನಾಡಿದ ಅವರು, ವಿಶ್ವಾದ್ಯಂತ ಕಳೆದ ೪ ದಶಕಗಳಲ್ಲಿ ಸಾವಿರಾರು ಸಣ್ಣಪುಟ್ಟ ಭಾಷೆಗಳು ಸಾವನಪ್ಪಿದ್ದು, ಇನ್ನು ೫೦ ವರ್ಷಗಳಲ್ಲಿ ಶೇಕಡ ಲರಷ್ಟು ಜನರ ಭಾಷೆಗಳು ಜಗತ್ತಿನ ಜನರ ಮೇಲೆ ತಮ್ಮ ಸಂಪೂರ್ಣ ಅಧಿಪತ್ಯ ಸಾಧಿಸುವ ಅಪಾಯವಿದೆ ಎಂದು ಎಚ್ಚರಿಸಿದರು.

<><><><>

ಬೆಂಗಳೂರು ಗ್ರಾಮಾಂತರ ಜಿಲ್ಲಾಡಳಿತದ ವತಿಯಿಂದ ದೇವನಹಳ್ಳಿ ತಾಲ್ಲೂಕಿನ ಕುಂದಾಣ ಹೋಬಳಿಯ ಭೈರದೇನಹಳ್ಳಿಯಲ್ಲಿ ಸರ್ಕಾರದ ಎರಡು ವರ್ಷದ ಸಾಧನೆ ಸಮಾವೇಶ ಹಾಗೂ ವಿವಿಧ ಕಾಮಗಾರಿಗಳ ಉದ್ಘಾಟನೆ, ಶಂಕುಸ್ಥಾಪನೆ ಮತ್ತು ಫಲಾನುಭವಿಗಳಿಗೆ ಸವಲತ್ತು ವಿತರಣೆ ಕಾರ್ಯಕ್ರಮ ನಾಳೆ ಬೆಳಗ್ಗೆ ಆಯೋಜಿಸಲಾಗಿದೆ. ಕಾರ್ಯಕ್ರಮವನ್ನು ಮುಖ್ಯಮಂತ್ರಿ ಸಿದ್ದರಾಮಯ್ಯ ಉದ್ಘಾಟಿಸಲಿದ್ದಾರೆ. ಕಾರ್ಯಕ್ರಮಕ್ಕೆ ಅಗತ್ಯ ಸಿದ್ಧತೆಗಳನ್ನು ಕೈಗೊಳ್ಳಲಾಗಿದೆ ಎಂದು ಜಿಲ್ಲಾಧಿಕಾರಿ ಎ.ಬಿ.ಬಸವರಾಜು ತಿಳಿಸಿದ್ದಾರೆ.

<><><><>

ಕಾಲುಬಾಯಿ ಜ್ವರ ಹಾಗೂ ಚರ್ಮಗಂಟು ರೋಗಗಳು ಹರಡುವುದನ್ನು ತಪ್ಪಿಸಲು ಮುಂಜಾಗ್ರತಾ ಕ್ರಮವಾಗಿ ಜಾನುವಾರುಗಳಿಗೆ ಲಸಿಕೆ ಹಾಕಿಸಬೇಕೆಂದು ಪಶು ಆರೋಗ್ಯಾಧಿಕಾರಿ ಡಾ. ನಿತಿನ್ ತಿಳಿಸಿದ್ದಾರೆ. ಕೋಲಾರ ತಾಲೂಕಿನ ಅರಾಭಿಕೊತ್ತನೂರಿನಲ್ಲಿ ಜಾನುವಾರುಗಳಿಗೆ ಲಸಿಕೆ ನೀಡಿ ಮಾತನಾಡಿದ ಅವರು, ಕಾಲು ಬಾಯಿ ಜ್ವರ ಹಾಗೂ ಚರ್ಮಗಂಟು ರೋಗಗಳು ವೇಗವಾಗಿ ಜಾನುವಾರುಗಳಿಗೆ ಹರಡುವ ರೋಗಗಳಾಗಿದ್ದು, ರೋಗ ಹರಡುವ ಮೊದಲೇ ರೈತರು ಜಾನುವಾರುಗಳಿಗೆ ಲಸಿಕೆ ಹಾಕಿಸಿದರೆ ರೋಗಗಳನ್ನು ತಡೆಗಟ್ಟಬಹುದು. ೪ ತಿಂಗಳ ವಯಸ್ಸಿನ ಒಳಗಿನ ಹಾಗೂ ೬ ತಿಂಗಳ ಗರ್ಭಧರಿಸಿದ ಜಾನುವಾರುಗಳನ್ನು ಹೊರತುಪಡಿಸಿ ಉಳಿದ ಎಲ್ಲಾ ಜಾನುವಾರುಗಳಿಗೆ ಲಸಿಕೆ ಉಚಿತವಾಗಿ ಹಾಕಲಾಗುತ್ತಿದೆ. ರೈತರು ಹತ್ತಿರದ ಪಶು ಆರೋಗ್ಯ ಕೇಂದ್ರಗಳಿಗೆ ಭೇಟಿ ಅಲ್ಲಿ ಲಸಿಕೆಗಳನ್ನು ಹಾಕಿಸಿಕೊಳ್ಳಬೇಕು ಎಂದು ಮಾಹಿತಿ ನೀಡಿದ್ದಾರೆ.

<><><><>

ಸಂಕ್ಷಿಪ್ತ ಸುದ್ದಿಗಳು

- ಬೆಂಗಳೂರು ಗ್ರಾಮಾಂತರ ಜಿಲ್ಲೆಯ ದೇವನಹಳ್ಳಿ ತಾಲೂಕಿನ ಚೆನ್ನಹಳ್ಳಿಯಲ್ಲಿನ ಕೋದಂಡರಾಮಸ್ವಾಮಿ ದೇವರ ರಾಮಕೋಟಿ ಉತ್ಸವ ಸಂಭ್ರಮದಿಂದ ನೆರವೇರಿತು. ಜಿಲ್ಲಾ ಉಸ್ತುವಾರಿ ಸಚಿವ ಕೆ.ಹೆಚ್. ಮುನಿಯಪ್ಪ ಭಾಗವಹಿಸಿ ವಿಶೇಷ ಪೂಜೆ ಸಲ್ಲಿಸಿದರು.

- ಚಿತ್ರದುರ್ಗ ಜಿಲ್ಲಾ ಕಾನೂನು ಸೇವಾ ಪ್ರಾಧಿಕಾರದಲ್ಲಿ ಕರ್ತವ್ಯ ನಿರ್ವಹಿಸಲು ಪ್ಯಾನಲ್ ವಕೀಲರ ಆಯ್ಕೆಗಾಗಿ ಅರ್ಜಿಗಳನ್ನು ಆಹ್ವಾನಿಸಲಾಗಿದೆ. ಮೇ ೦೭ ಅರ್ಜಿ ಸಲ್ಲಿಸಲು ಕೊನೆಯ ದಿನ.
- ಯಾವುದೇ ಜ್ವರ ಇರಲಿ ರಕ್ತ ಪರೀಕ್ಷೆ ಮಾಡಿಸಿಕೊಳ್ಳಿ, ಎಲ್ಲಾ ಸರ್ಕಾರಿ ಆಸ್ಪತ್ರೆಗಳಲ್ಲಿ ಮಲೇರಿಯಾ ತಪಾಸಣೆ ಉಚಿತ, ಸಂಪೂರ್ಣ ಚಿಕಿತ್ಸೆ ಪಡೆದು ಮಲೇರಿಯಾದಿಂದ ಮುಕ್ತರಾಗಿ ಎಂದು ಹಾಸನ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ. ಅನಿಲ್ ಹೆಚ್ ತಿಳಿಸಿದ್ದಾರೆ.

<><> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <><>